ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೪

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆರಡನೆಯ ಅಧಿವೇಶನ

## ಗುರುವಾರ, ದಿನಾಂಕ ೨೪ನೇ ನವೆಂಬರ್, ೨೦೧೬

---

### ಸಮೂಹ – IV

೧. ಮುಖ್ಯಮಂತ್ರಿಗಳು

೨. ಗೃಹ ಸಚಿವರು

೩. ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು

೪. ನಗರಾಭಿವೃದ್ಧಿ ಹಾಗೂ ಹಜ್ ಸಚಿವರು

೫. ಅಬಕಾರಿ ಸಚಿವರು

---

### ಜಯಮಹಲ್ ರಸ್ತೆ ಅಗಲೀಕರಣದ ಕುರಿತು

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) –**

೪೬ (೪೬೩) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದ ಮೇಖ್ರಿ ವೃತ್ತದಿಂದ ಬೆಂಗಳೂರು ದಂಡು ರೈಲ್ವೇ ನಿಲ್ದಾಣದವರೆಗಿನ ಜಯಮಹಲ್ ರಸ್ತೆ ಅಗಲೀಕರಣ ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿದೆ;

(ಆ) ಸದರಿ ಕಾಮಗಾರಿಯನ್ನು ಪೂರ್ಣಗೊಳಿಸದೆ ಅರ್ಧದಲ್ಲಿಯೇ ನಿಲ್ಲಿಸಿರುವುದರಿಂದ ಅಲ್ಪಸ್ವಲ್ಪ ಅಗಲೀಕರಿಸಿರುವ ರಸ್ತೆಗಳಲ್ಲಿ ಟ್ರಕ್ ಹಾಗೂ ಇತರೆ ಖಾಸಗಿ ವಾಹನಗಳನ್ನು ಅನಧಿಕೃತ ಪಾರ್ಕಿಂಗ್ ಮಾಡುತ್ತಿರುವುದರಿಂದ, ವಾಹನ ಸವಾರರು ಟ್ರಾಫಿಕ್ ಜಾಮ್ ಕಿರಿಕಿರಿ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಸದರಿ ರಸ್ತೆ ಅಗಲೀಕರಣ ಕಾಮಗಾರಿಯು ಟ್ರಾಫಿಕ್ ಸಮಸ್ಯೆ ನಿವಾರಿಸಿ ವಾಹನ ಸವಾರರಿಗೆ ಸುಗಮವಾಗಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಸೇರಿದಂತೆ ಇತರ ರಸ್ತೆಗಳಿಗೆ ಸೇರಲು ಅನುಕೂಲ ಮಾಡಲಾಗಿದೆಯೇ; ಅಥವಾ ಖಾಸಗಿ ವಾಹನಗಳ ಅನಧಿಕೃತ ಪಾರ್ಕಿಂಗ್‌ಗಾಗಿ ಮಾಡಲಾಗುತ್ತಿದೆಯೇ ಎಂಬ ಬಗ್ಗೆ ವಿವರ ನೀಡುವುದು; ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲು ಇನ್ನು ಎಷ್ಟು ಕಾಲಾವಧಿ ಬೇಕಾಗಿದೆ? (ವಿವರ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೭ (೫೦೫) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಳೆದ ಐದು ವರ್ಷಗಳಲ್ಲಿ ನಡೆದ ದುರುಪಯೋಗದ ಹಣವೆಷ್ಟು; (ವಿವರ ನೀಡುವುದು)

(ಆ) ಇವುಗಳ ತನಿಖೆ ಯಾವ ಹಂತದಲ್ಲಿದೆ; ಈ ಹಗರಣಗಳಲ್ಲಿ ಸಿಲುಕಿ ಅಮಾನತ್ತುಗೊಂಡ ಅಧಿಕಾರಿಗಳ ಸಂಖ್ಯೆ ಎಷ್ಟು; (ಹುದ್ದೆವಾರು, ಹೆಸರು ಸಹಿತ ವಿವರ ನೀಡುವುದು)

(ಇ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು "ಕಸಮುಕ್ತ" ನಗರವನ್ನಾಗಿಸಲು ಇತ್ತೀಚೆಗೆ ಕೈಗೊಂಡ ಕ್ರಮವೇನು; ಖರ್ಚು ಮಾಡಿದ ವೆಚ್ಚವೆಷ್ಟು; (ವಿವರ ನೀಡುವುದು) ಇದರ ಹೊರತಾಗಿಯೂ ಸಾರ್ವಜನಿಕರ ದೂರುಗಳಿವೆಯೇ; ಹಾಗಿದ್ದಲ್ಲಿ, ವಿವರ ನೀಡುವುದು;

(ಈ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರ ಒಟ್ಟು ಸಂಖ್ಯೆ ಎಷ್ಟು; ಇದರಲ್ಲಿ ಹಾಲಿ ಇರುವ ಹುದ್ದೆಗಳೆಷ್ಟು; (ವಿವರ ನೀಡುವುದು)

(ಉ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಳೆದ ೨೦ ವರ್ಷಗಳಲ್ಲಿ ಸೇವೆಯಲ್ಲಿರುವಾಗ ಮೃತಪಟ್ಟ ಪೌರ ಕಾರ್ಮಿಕರ ಸಂಖ್ಯೆ ಎಷ್ಟು; ಇವರ ಪೈಕಿ ಅನುಕಂಪದ ನೌಕರಿ ಸಿಗದೇ ಇರುವ ಕುಟುಂಬಗಳೆಷ್ಟು? (ಪೂರ್ಣ ವಿವರ ನೀಡುವುದು)

## ಮಹಾನಗರ ಪಾಲಿಕೆಗಳಿಂದ ಗ್ರಂಥಾಲಯ ಕರ ವಸೂಲಿ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೪೮ (೪೬೫) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳು ಹಲವು ವರ್ಷಗಳಿಂದ ಗ್ರಂಥಾಲಯ ಇಲಾಖೆಗೆ ಪಾವತಿಸಬೇಕಾದ ಗ್ರಂಥಾಲಯ ಕರವನ್ನು ನೀಡದಿರುವುದು ಸರ್ಕಾರದ ಗಮನದಲ್ಲಿದೆಯೇ;

(ಆ) ಈ ಗ್ರಂಥಾಲಯ ಕರವನ್ನು ಯಾವಾಗ ಪಾವತಿಸಲಾಗುವುದು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಇಷ್ಟು ವರ್ಷಗಳಿಂದ ಎಷ್ಟು ಹಣವನ್ನು ಬಾಕಿ ಉಳಿಸಿಕೊಳ್ಳಲಾಗಿದೆ; ಉಳಿಸಿಕೊಂಡಿರುವುದಕ್ಕೆ ಕಾರಣಗಳೇನು ಮತ್ತು ಉಳಿಸಿಕೊಂಡಿರುವ ಬಾಕಿ ಹಣವೆಷ್ಟು; ಯಾವಾಗ ಪಾವತಿಸಲಾಗುವುದು?

## ಜಾಹೀರಾತು ಫಲಕ ಅಳವಡಿಕೆಗೆ ಮಾನದಂಡ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೪೯ (೫೧೩) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಜಾಹೀರಾತು ಫಲಕ ಅಳವಡಿಸಲು ಇರುವ ಮಾನದಂಡವೇನು; ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಒಟ್ಟು ಜಾಹೀರಾತು ಫಲಕಗಳ ಸಂಖ್ಯೆ ಎಷ್ಟು; ಇದರಿಂದ ವಾರ್ಷಿಕವಾಗಿ ಎಷ್ಟು ಆದಾಯ ಬರುತ್ತದೆ;

(ಆ) ಅನಧಿಕೃತ ಜಾಹೀರಾತು ಫಲಕಗಳು ನಗರದಲ್ಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಅವುಗಳ ಸಂಖ್ಯೆ ಎಷ್ಟು;

(ಈ) ಅನಧಿಕೃತ ಜಾಹೀರಾತು ಫಲಕಗಳನ್ನು ಅಳವಡಿಸಿರುವವರ ವಿರುದ್ಧ ಹಾಗೂ ಅದನ್ನು ತೆರವುಗೊಳಿಸಲು ಸರ್ಕಾರ ತೆಗೆದುಕೊಂಡ ಕಠಿಣ ಕ್ರಮಗಳೇನು?

## ಹೆಚ್.ಎಸ್.ಆರ್. ಬಡಾವಣೆಯಲ್ಲಿ ಬೀದಿ ಬದಿಯ ವ್ಯಾಪಾರಿಗಳ ಹಾವಳಿ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೫೦ (೫೦೮) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನ ಹೆಚ್.ಎಸ್.ಆರ್. ಬಡಾವಣೆಯಲ್ಲಿ ೧ ರಿಂದ ೭ನೇ ಸೆಕ್ಟಾರ್‌ವರೆಗೆ ಇರುವ ಹೋಟೆಲ್‌ಗಳ ಸಂಖ್ಯೆ ಎಷ್ಟು;

(ಆ) ಇವುಗಳಲ್ಲಿ ಪರವಾನಗಿಯುನ್ನು ಪಡೆದು ಅನಧಿಕೃತವಾಗಿ ನಡೆಸಲಾಗುತ್ತಿರುವ ಹೋಟೆಲ್‌ಗಳ ಸಂಖ್ಯೆ ಎಷ್ಟು; ಪರವಾನಗಿ ಪಡೆಯದೆ ಅನಧಿಕೃತವಾಗಿ ನಡೆಸಲಾಗುತ್ತಿರುವ ಹೋಟೆಲ್‌ಗಳ ಸಂಖ್ಯೆ ಎಷ್ಟು;

(ಇ) ಹೆಚ್.ಎಸ್.ಆರ್. ಬಡಾವಣೆಯ ೧೪ನೇ ಮೈನ್, ಮ್ಯಾಕ್ ಡೋನಾಲ್ಡ್ ವೃತ್ತದ ಸರ್ವೀಸ್ ರಸ್ತೆಯಲ್ಲಿ ಬೀದಿ ಬದಿಯ ವ್ಯಾಪಾರಿಗಳ ಹಾವಳಿ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಇಲ್ಲಿನ ಬಿ.ಬಿ.ಎಂ.ಪಿ. ಅಧಿಕಾರಿಗಳು ಈ ಬೀದಿ ವ್ಯಾಪಾರಿಗಳೊಂದಿಗೆ ಶಾಮೀಲಾಗಿ ಅವರುಗಳಿಗೆ ಅನುಕೂಲ ಮಾಡುತ್ತಿರುವ ಬಗ್ಗೆ ಸರ್ಕಾರ ಗಮನಿಸಿದೆಯೇ;

(ಉ) ಸುಮಾರು ೧೫೦ ರಿಂದ ೧೭೦ ಬೀದಿ ಬದಿಯ ಮಾಂಸಾಹಾರ ಅಂಗಡಿಗಳಿಂದ ಇಲ್ಲಿನ ಸ್ವಚ್ಛತೆ ಮತ್ತು ಆ ರಸ್ತೆಯಲ್ಲಿ ಓಡಾಡಲು ಸಾಧ್ಯವಾದಷ್ಟು ತೊಂದರೆ ಆಗುತ್ತಿರುವುದನ್ನು ಸರ್ಕಾರ ಮನಗಂಡಿದೆಯೇ;

(ಊ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಯಾವ ಕ್ರಮಗಳನ್ನು ಕೈಗೊಳ್ಳುವುದು?

## ಬಿ.ಎಂ.ಆರ್.ಸಿ.ಎಲ್.ನ ಸಿಬ್ಬಂದಿಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೫೧ (೪೭೯) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ (ಬಿಎಂಆರ್‌ಸಿಎಲ್)ದಲ್ಲಿ ಅನ್ಯ ಯೋಜನೆಯಡಿ ಮತ್ತು ಗುತ್ತಿಗೆಯಡಿ ಕೆಲಸ ನಿರ್ವಹಿಸುತ್ತಿರುವ

ಸಿಬ್ಬಂದಿಗಳೆಷ್ಟು; (ಸಿಬ್ಬಂದಿ ಹೆಸರು, ಮಾತೃ ಇಲಾಖೆಯಲ್ಲಿನ ಹುದ್ದೆಯ ಪದನಾಮ, ಅಲ್ಲಿನ ವೇತನ ಶ್ರೇಣಿ, ಬಿಎಂಆರ್‌ಸಿಎಲ್‌ನಲ್ಲಿ ಅವರು ಸೇರಿದ್ದ ದಿನಾಂಕ, ಹಾಲಿ ಹೊಂದಿರುವ ಹುದ್ದೆಯ ಪದನಾಮ, ವೇತನ ಶ್ರೇಣಿ, ಒಟ್ಟು ಪಡೆಯುತ್ತಿರುವ ವೇತನದ ವಿವರ ನೀಡುವುದು)

(ಆ) ಅನ್ಯ ಸೇವೆಯಡಿ ಮತ್ತು ಗುತ್ತಿಗೆಯಡಿ ಕೆಲಸ ನಿರ್ವಹಿಸುತ್ತಿರುವ ಹಿರಿಯ ಅಧಿಕಾರಿಗಳು ಹೊರ ರಾಜ್ಯ ಮತ್ತು ಬೇರೆ ಇಲಾಖೆಗಳಿಂದ ಬಂದಿದ್ದು, ಇವರು ಬಿಎಂಆರ್‌ಸಿಎಲ್‌ನ ಸಿಬ್ಬಂದಿಗೆ ತುಂಬಾ ಕಿರುಕುಳ, ಮಾನಸಿಕ ಹಿಂಸೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರ ಹಿನ್ನಲೆಯಲ್ಲಿ ಒಬ್ಬ ಉದ್ಯೋಗಿ ಆತ್ಮಹತ್ಯೆ ಮಾಡಿಕೊಂಡಿರುವುದು ನಿಜವೇ;

(ಇ) ಮೇಲ್ಕಂಡ ಸಂಸ್ಥೆಯಲ್ಲಿ ಯಾವ ಯಾವ ಹುದ್ದೆಗಳು ಎಷ್ಟೆಷ್ಟು ಖಾಲಿ ಇವೆ; ಇವುಗಳ ನೇಮಕಾತಿಗೆ ಅನುಸರಿಸುತ್ತಿರುವ ಮಾನದಂಡವೇನು; ಕರ್ನಾಟಕದವರಿಗೆ ಮೊದಲ ಆದ್ಯತೆ ನೀಡುವಲ್ಲಿ ಇರುವ ತೊಂದರೆ ಏನು; (ಪೂರ್ಣ ವಿವರ ನೀಡುವುದು)

(ಈ) ಬಿಎಂಆರ್‌ಸಿಎಲ್ ನಲ್ಲಿ 'ಸಿ' ವೃಂದದ ಹುದ್ದೆಗಳಿಗೆ ಕರ್ನಾಟಕದವರನ್ನು ನೇಮಕ ಮಾಡಿ ಸಹಾಯಕ ವ್ಯವಸ್ಥಾಪಕರ ಹುದ್ದೆಯಿಂದ ಉನ್ನತ ಹುದ್ದೆಯವರೆಗೆ ಬೇರೆ ರಾಜ್ಯ ಮತ್ತು ಬೇರೆ ಇಲಾಖೆಯಿಂದ ಅನ್ಯ ಯೋಜನೆಯಡಿ ನೇಮಕ ಮಾಡಿಕೊಂಡಿದ್ದು ರಾಜ್ಯದ ಸಿಬ್ಬಂದಿಗೆ ಪದೋನ್ನತಿ ಅಥವಾ ನೇರವಾಗಿ ಅರ್ಜಿ ಕರೆದು ಹುದ್ದೆ ತುಂಬದಿರಲು ಕಾರಣವೇನು; ಈ ಅನ್ಯಾಯವನ್ನು ಹೋಗಲಾಡಿಸಲು ಕೈಗೊಂಡ ಕ್ರಮಗಳೇನು; (ಮಾಹಿತಿ ನೀಡುವುದು)

(ಉ) ದಿನದ ಮೂರು ಪಾಳಿಗಳಲ್ಲಿಯೂ ಕರ್ತವ್ಯ ನಿರ್ವಹಿಸುವ ಸಿಬ್ಬಂದಿಗಳಿಗೆ ವಿಶೇಷ ಭತ್ಯೆ ಮತ್ತು ಇತರ ಭತ್ಯೆಗಳನ್ನು ನೀಡಲಾಗುತ್ತಿದೆಯೇ; ಇಲ್ಲವಾದಲ್ಲಿ, ಯಾವಾಗ ನೀಡಲಾಗುವುದು;

(ಊ) ಬಿಎಂಆರ್‌ಸಿಎಲ್ ೨೦೧೦, ೨೦೧೧ ಮತ್ತು ೨೦೧೨ನೇ ಸಾಲಿನ ನೇಮಕಾತಿಯಲ್ಲಿ ನಿಲ್ದಾಣ ನಿಯಂತ್ರಕ/ರೈಲು ಚಾಲಕ (Station Controller/Train Operator) ಎಂಬ ಪದನಾಮದಲ್ಲಿ ನೇಮಕಾತಿ

ಪ್ರಕ್ರಿಯೆ ನಡೆದಿದ್ದು, ಸೆಪ್ಟೆಂಬರ್ ೪, ೨೦೧೪ರ ಬಿಎಂಆರ್‌ಸಿಎಲ್ ಕಛೇರಿ ಆದೇಶ ಸಂಖ್ಯೆ: ಹೆಚ್‌ಆರ್/೧೧೨/೨೦೧೪ರ ಅನ್ವಯ ನಿಲ್ದಾಣ ನಿಯಂತ್ರಕ/ ರೈಲು ಚಾಲಕ (Station Controller/Train Operator) ಹುದ್ದೆಯ ಪದನಾಮವನ್ನು ರೈಲು ಚಾಲಕ (Train Operator) ಎಂದು ಬದಲಾಯಿಸಿರುವುದಕ್ಕೆ ಕಾರಣವೇನು?

## ರಾಜ್ಯ ಸರ್ಕಾರಿ ನೌಕರರಿಗೆ, ಕೇಂದ್ರ ಸರ್ಕಾರಿ ನೌಕರರಿಗೆ ನೀಡುವಷ್ಟೇ ಸಮಾನ ವೇತನ ನೀಡುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೫೨ (೪೫೦) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೇಂದ್ರ ಸರ್ಕಾರಿ ನೌಕರರಿಗೆ ನೀಡುತ್ತಿರುವಷ್ಟೇ ಸಮಾನ ವೇತನವನ್ನು ರಾಜ್ಯ ಸರ್ಕಾರದ ನೌಕರರಿಗೆ ನೀಡುವ ಬಗ್ಗೆ ಸರ್ಕಾರದ ನಿಲುವೇನು;

(ಆ) ವೇತನ ಆಯೋಗ ರಚನೆಯಾಗಿ, ವೇತನ ಪರಿಷ್ಕರಣೆಯಾಗಿ ಎಷ್ಟು ವರ್ಷಗಳಾಯಿತು?

## ರಾಜ್ಯದಲ್ಲಿರುವ ಐ.ಪಿ.ಎಸ್. ಅಧಿಕಾರಿಗಳು ಉನ್ನತ ಶಿಕ್ಷಣಕ್ಕಾಗಿ ರಜಾ ಸೌಲಭ್ಯವನ್ನು ಪಡೆದುಕೊಂಡ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೫೩ (೪೩೯) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಐ.ಪಿ.ಎಸ್. ಅಧಿಕಾರಿಗಳ ಸಂಖ್ಯೆ ಎಷ್ಟು; ಇವರಲ್ಲಿ ಎಷ್ಟು ಅಧಿಕಾರಿಗಳು ಉನ್ನತ ಶಿಕ್ಷಣಕ್ಕಾಗಿ ರಜಾ ಸೌಲಭ್ಯವನ್ನು ಉಪಯೋಗಿಸಿಕೊಂಡಿರುತ್ತಾರೆ; ಇದರಲ್ಲಿ ವೇತನ ಸಹಿತ ಉನ್ನತ ಶಿಕ್ಷಣಕ್ಕಾಗಿ ರಜಾ ಸೌಲಭ್ಯವನ್ನು ಪಡೆದುಕೊಂಡಿರುವ ಅಧಿಕಾರಿಗಳು ಎಷ್ಟು; (ವಿವರ ನೀಡುವುದು)

(ಆ) ಉನ್ನತ ಶಿಕ್ಷಣ ರಜಾ ಸೌಲಭ್ಯವನ್ನು ಉಪಯೋಗಿಸಿಕೊಂಡ ಬಳಿಕ ಎಷ್ಟು ಅಧಿಕಾರಿಗಳು ಕರ್ತವ್ಯಕ್ಕೆ ಹಿಂತಿರುಗಿರುತ್ತಾರೆ; ಉನ್ನತ ಶಿಕ್ಷಣ ರಜಾ ಸೌಲಭ್ಯದ ಅವಧಿ ಮುಗಿದ ಮೇಲೂ ಎಷ್ಟು ಅಧಿಕಾರಿಗಳು ಕರ್ತವ್ಯಕ್ಕೆ

ವರದಿ ಮಾಡಿಕೊಳ್ಳುವುದು ಬಾಕಿ ಇದೆ; ಈ ರೀತಿಯಾಗಿ ಸರ್ಕಾರಿ ಸೌಲಭ್ಯವನ್ನು ಪಡೆದ ಬಳಿಕ ಕರ್ತವ್ಯಕ್ಕೆ ಹಿಂತಿರುಗದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ಉನ್ನತ ಶಿಕ್ಷಣಕ್ಕಾಗಿ ರಜೆಯನ್ನು ಕೋರಿ ಎಷ್ಟು ಪೊಲೀಸ್ ಪೇದೆ ಮತ್ತು ಮುಖ್ಯ ಪೇದೆಗಳು ಮನವಿ ಸಲ್ಲಿಸಿರುತ್ತಾರೆ; ಇವರಲ್ಲಿ ಎಷ್ಟು ಸಿಬ್ಬಂದಿಗಳಿಗೆ ಉನ್ನತ ಶಿಕ್ಷಣ ಸೌಲಭ್ಯಕ್ಕಾಗಿ ವೇತನ ಸಹಿತ ರಜೆ ನೀಡಲಾಗಿದೆ; ಇಲ್ಲವಾದಲ್ಲಿ, ಪೊಲೀಸ್ ಪೇದೆ ಮತ್ತು ಮುಖ್ಯ ಪೇದೆಗಳು ಉನ್ನತ ಶಿಕ್ಷಣ ಪಡೆಯಲು ಅನುಕೂಲವಾಗುವಂತೆ ಉನ್ನತ ಶಿಕ್ಷಣ ರಜಾ ಸೌಲಭ್ಯವನ್ನು ನೀಡುವ ಪ್ರಸ್ತಾವ ಸರ್ಕಾರದ ಮುಂದಿದೆಯೇ?

## ೭ನೇ ವೇತನ ಶ್ರೇಣಿ ಜಾರಿ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೫೪ (೫೦೧+೪೩೫) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಯಾವ ಯಾವ ವೇತನ ಆಯೋಗ/ಸಮಿತಿಯನ್ನು ಯಾವ ಯಾವ ವರ್ಷಗಳಲ್ಲಿ ರಚನೆ ಮಾಡಲಾಯಿತು ಮತ್ತು ಯಾವಾಗ ವೇತನ ಶ್ರೇಣಿಗಳನ್ನು ಜಾರಿಗೊಳಿಸಲಾಯಿತು;

(ಆ) ಮೊದಲನೇ ವೇತನ ಶ್ರೇಣಿಯಿಂದ ಹಿಡಿದು ಇಲ್ಲಿಯವರೆಗಿನ ಶ್ರೇಣಿಗಳ ಸಂಪೂರ್ಣ ವಿವರ ನೀಡುವುದು;

(ಇ) ಎಲ್ಲಾ ವೇತನ ಆಯೋಗ/ಸಮಿತಿಗಳ ವರದಿಗಳ ಪ್ರತಿ ನೀಡುವುದು; ಜಾರಿಗೊಳಿಸಿದ ವೇತನ ಶ್ರೇಣಿಗಳ ವಿವರಗಳನ್ನು ನೀಡುವುದು;

(ಈ) ೬ನೇ ವೇತನ ಆಯೋಗವನ್ನು ಯಾವಾಗ ರಚಿಸಲಾಯಿತು; ಆ ವೇತನ ಆಯೋಗಗಳ ವರದಿಯ ಪ್ರತಿ ನೀಡುವುದು;

(ಉ) ೭ನೇ ವೇತನ ಆಯೋಗ ಸಮಿತಿಯನ್ನು ನೇಮಕ ಮಾಡಬೇಕೆನ್ನುವ ನೌಕರರ ಬೇಡಿಕೆಯನ್ನು ಪರಿಗಣಿಸಿ, ವೇತನ ಆಯೋಗ ರಚಿಸಿ, ನಿಗದಿತ ಕಾಲಮಿತಿಯೊಳಗೆ ವರದಿ ಕೇಳುವ ಯೋಚನೆ ಸರ್ಕಾರದ ಮುಂದಿದೆಯೇ;

ರಾಷ್ಟ್ರದ ಕೆಲವು ರಾಜ್ಯಗಳಲ್ಲಿರುವಂತೆ ನಮ್ಮ ರಾಜ್ಯದಲ್ಲಿಯೂ ವೇತನ ಆಯೋಗ ರಚನೆ ಹಾಗೂ ವರದಿಯ ಅನುಷ್ಠಾನಗೊಳಿಸುವ ಕುರಿತಾಗಿ ಸರ್ಕಾರ ಈವರೆವಿಗೂ ಕೈಗೊಂಡಿರುವ ಕ್ರಮ ಏನು; (ಸಂಪೂರ್ಣ ವಿವರ ನೀಡುವುದು)

(ಊ) ಕೇಂದ್ರ ಸರ್ಕಾರದ ೭ನೇ ವೇತನ ಶ್ರೇಣಿಯನ್ನು ರಾಜ್ಯ ಸರ್ಕಾರ ಯಾವಾಗ ಜಾರಿಗೊಳಿಸುವುದು; ಇದಕ್ಕೆ ಸರ್ಕಾರಕ್ಕೆ ಬೇಕಾಗುವ ಹಣದ ಅವಶ್ಯಕತೆ ಎಷ್ಟು; ಜಾರಿ ಮಾಡಲು ಆಗದಿದ್ದಲ್ಲಿ, ಅದಕ್ಕೆ ಕಾರಣಗಳೇನು;

(ಋ) ಸರ್ಕಾರಿ ನೌಕರರು ಹೊಸ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ರದ್ದುಗೊಳಿಸಲು ಆಗ್ರಹಿಸುತ್ತಿರುವುದನ್ನು ಪರಿಗಣಿಸಿ ಸರ್ಕಾರ ಹಳೇ ಪಿಂಚಣಿ ವ್ಯವಸ್ಥೆಯನ್ನು ಮತ್ತೆ ಜಾರಿಗೊಳಿಸುವ ಕ್ರಮ ಕೈಗೊಳ್ಳುವುದೇ; ಇದಕ್ಕೆ ಇರುವ ಅಡೆತಡೆಗಳೇನು; ಈ ಅಡೆತಡೆಗಳ ನಿವಾರಣೆಗೆ ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು?

## ರಾಜ್ಯದಲ್ಲಿ ನಡೆದಿರುವ ಕೊಲೆ, ಅತ್ಯಾಚಾರ, ಗಲಭೆ ಪ್ರಕರಣಗಳ ಕುರಿತು

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) –**

೫೫ (೪೨೬) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೪–೧೫ ಹಾಗೂ ೨೦೧೫–೧೬ನೇ ಸಾಲಿನಲ್ಲಿ ರಾಜ್ಯದಲ್ಲಿ ನಡೆದಿರುವ ಕೊಲೆ, ಅತ್ಯಾಚಾರ ಹಾಗೂ ಗಲಭೆ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಪ್ರಕರಣಗಳಲ್ಲಿ ತನಿಖಾ ಕ್ರಮ ಕೈಗೊಂಡು, ಸಾಬೀತಾದ ಪ್ರಕರಣಗಳಲ್ಲಿ ಆರೋಪಿಗಳನ್ನು ಬಂಧಿಸಿ, ನ್ಯಾಯಾಲಯಕ್ಕೆ ಹಾಜರುಪಡಿಸಿರುವ ಪ್ರಕರಣಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)

## ಮೈಸೂರು ನಗರ ಮತ್ತು ಜಿಲ್ಲೆಯಲ್ಲಿ ಅಪರಾಧಗಳ ಹೆಚ್ಚಳದ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೬ (೪೧೩) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮೈಸೂರು ನಗರ ಹಾಗೂ ಜಿಲ್ಲೆಯಲ್ಲಿ ಖಾಲಿ ಇರುವ ಪೋಲೀಸ್ ಅಧಿಕಾರಿಗಳು ಮತ್ತು ಅಧೀನ ಸಿಬ್ಬಂದಿಯ ಸಂಖ್ಯೆ ಎಷ್ಟು; ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು;

(ಆ) ಮೈಸೂರು ನಗರ ಮತ್ತು ಜಿಲ್ಲೆಯಲ್ಲಿ ಜನವರಿ ೨೦೧೬ ರಿಂದ ಅಕ್ಟೋಬರ್ ೧೬ರವರೆಗೆ ನಡೆದಿರುವ ಕೊಲೆ, ದರೋಡೆ, ಕಳವು, ಚಿನ್ನದ ಸರ ಅಪಹರಣ, ಮೊದಲಾದ ಅಪರಾಧ ಪ್ರಕರಣಗಳ ಸಂಖ್ಯೆ ಎಷ್ಟು; ಆ ಪೈಕಿ ಎಷ್ಟು ಪ್ರಕರಣಗಳನ್ನು ಪತ್ತೆ ಮಾಡಲಾಗಿದೆ; ಮೈಸೂರು ನಗರದಲ್ಲಿ ಅಪರಾಧ ಪ್ರಕರಣಗಳಲ್ಲಿ ಹೆಚ್ಚಳವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಮೈಸೂರು ಮಾಲ್, ಮೃಗಾಲಯ, ರೇಸ್ ಕೋರ್ಸ್ ಆವರಣಗಳಲ್ಲಿ ನಿಯಮ ಉಲ್ಲಂಘಿಸಿ, ವಾಹನ ನಿಲುಗಡೆ ಮಾಡುತ್ತಿರುವುದು, ವಾಹನ ನಿಲುಗಡೆಯಲ್ಲಿ ಅವ್ಯವಸ್ಥೆ ಉಂಟಾಗಿರುವ ಕಾರಣ, ಟ್ರಾಫಿಕ್ ಜಾಮ್ ಆಗುತ್ತಿರುವುದು, ಜನ ಸಂಚಾರಕ್ಕೆ, ವಾಹನ ಸಂಚಾರಕ್ಕೆ, ನಿವಾಸಿಗಳಿಗೆ ಹಾಗೂ ಪ್ರವಾಸಿಗರಿಗೆ ಬಹಳ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಸೂಕ್ತ ಕ್ರಮ ಜರುಗಿಸುವುದೇ?

## ಗದಗ ಬೆಟಗೇರಿ ಅವಳಿ ನಗರಕ್ಕೆ ಕುಡಿಯುವ ನೀರಿನ ಪೂರೈಕೆ ಕುರಿತು

**ಶ್ರೀ ಎಸ್.ವಿ. ಸಂಕನೂರ (ಪದವೀಧರರ ಕ್ಷೇತ್ರ) –**

೫೭ (೫೦೪) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗದಗ–ಬೆಟಗೇರಿ ಅವಳಿ ನಗರದ ನಾಗರಿಕರಿಗೆ ಮುಂಡರಗಿ ತಾಲ್ಲೂಕಿನ ಕೋರ್ಲಹಳ್ಳಿ ಗ್ರಾಮ ತುಂಗಭದ್ರಾ ನದಿಯಿಂದ ನಗರದ ಪ್ರತೀ ವಾರ್ಡ್‌ಗಳಿಗೆ ಎಷ್ಟು ದಿನಗಳಿಗೊಮ್ಮೆ ನೀರು ಪೂರೈಸಲಾಗುತ್ತಿದೆ;

(ಆ) ಗದಗ–ಬೆಟಗೇರಿ ನಾಗರಿಕರಿಗೆ ಸದ್ಯದ ಪರಿಸ್ಥಿತಿಯಲ್ಲಿ ಕನಿಷ್ಟ ೮ ರಿಂದ ೧೦ ದಿನಗಳಿಗೊಮ್ಮೆ ಕುಡಿಯುವ ನೀರು ಪೂರೈಕೆ ಮಾಡಲು ಸಾಧ್ಯವೇ; ಸಾಧ್ಯವಿರದೆ ಇದ್ದಲ್ಲಿ, ಅದಕ್ಕೆ ಇರುವ ತೊಂದರೆಗಳೇನು;

(ಇ) ಗದಗ–ಬೆಟಗೇರಿ ಅವಳಿ ನಗರಕ್ಕೆ ಕುಡಿಯುವ ನೀರಿನ ಪೂರೈಕೆಯ ಒಂದನೇ ಹಂತದ ಯೋಜನೆ ಅಡಿ ಮುಂಡರಗಿ ತಾಲ್ಲೂಕಿನ ಕೋರ್ಲಹಳ್ಳಿಯಿಂದ ಗದಗಗೆ ಬರುವ ಮಾರ್ಗದಲ್ಲಿ ಎಷ್ಟು ಪಟ್ಟಣ ಹಾಗೂ ಗ್ರಾಮಗಳಿಗೆ ನೀರಿನ ವಿತರಣೆ ಮಾಡಲಾಗುತ್ತಿದೆ; (ವಿವರ ನೀಡುವುದು) ಹಾಗೂ ಈ ಪಟ್ಟಣ ಮತ್ತು ಗ್ರಾಮಗಳಿಗೆ ಎಷ್ಟು ದಿನಕ್ಕೊಮ್ಮೆ ನೀರನ್ನು ಪೂರೈಸಲಾಗುತ್ತಿದೆ; (ವಿವರ ನೀಡುವುದು)

(ಈ) ಗದಗ–ಬೆಟಗೇರಿ ಕುಡಿಯುವ ನೀರಿನ ಎರಡನೆಯ ಹಂತದ ಯೋಜನೆ ಯಾವಾಗ ಪೂರ್ಣಗೊಳ್ಳುವ ಸಾಧ್ಯತೆ ಇದೆ ಮತ್ತು ಅದಕ್ಕೆ ಯಾವಾಗ ಚಾಲನೆ ನೀಡಲಾಗುವುದು;

(ಉ) ಕುಡಿಯುವ ನೀರಿನ ಸಮರ್ಪಕ ಪೂರೈಕೆಗಾಗಿ ದಿನಾಂಕ ೧೪–೭–೨೦೧೫ರಲ್ಲಿ ನಾಗರಿಕರು ಉಗ್ರ ಪ್ರತಿಭಟನೆ ಮಾಡಿದಾಗ ಅವರುಗಳ ಮೇಲೆ ಕ್ರಿಮಿನಲ್ ಕೇಸ್ ದಾಖಲಾಗಿದ್ದು, ಅಂತಹವುಗಳನ್ನು ವಾಪಸ್ಸು ಪಡೆದುಕೊಳ್ಳಲು ಮನವಿ ಮಾಡಿಕೊಳ್ಳಲಾಗಿತ್ತು; ಇತ್ತೀಚೆಗೆ ಮುಖ್ಯಮಂತ್ರಿಗಳು ಗದಗ ಜಿಲ್ಲೆಗೆ ಬರ ವೀಕ್ಷಣೆಗಾಗಿ ಬಂದಾಗ ಜಿಲ್ಲಾಧಿಕಾರಿಗಳ ಕಛೇರಿಯ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಈ ಕೇಸ್‌ಗಳನ್ನು ವಾಪಸ್ಸು ಪಡೆಯುವುದಾಗಿ ಹೇಳಿಕೆ ನೀಡಿದ ಹಿನ್ನೆಲೆಯಲ್ಲಿ ಸರ್ಕಾರ ಏನು ಕ್ರಮ ಕೈಗೊಂಡಿದೆ?

## ವೇತನ ತಾರತಮ್ಯ ಹಾಗೂ ಸಿಬ್ಬಂದಿ ಕೊರತೆಯಿಂದ ಕೆಲಸದ ಒತ್ತಡ ಹೆಚ್ಚಾಗಿ ನೌಕರರ ಆತ್ಮಸ್ಥೈರ್ಯ ಕುಸಿಯುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೮ (೪೫೫) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವೇತನ ತಾರತಮ್ಯ ಹಾಗೂ ಸೌಲಭ್ಯಗಳ ಕೊರತೆ, ಜನಸಂಖ್ಯೆ ಮತ್ತು ಸರ್ಕಾರಿ ಯೋಜನೆಗಳು ಹೆಚ್ಚಿದಂತೆ ಕೆಲಸದ ಒತ್ತಡ ಹೆಚ್ಚಾಗಿ, ಸಿಬ್ಬಂದಿ ಕೊರತೆಯಿಂದ ಅನಿವಾರ್ಯ ಸೇವಾ ವ್ಯವಸ್ಥೆಯ ಒತ್ತಡದಿಂದಾಗಿ ಸರ್ಕಾರಿ ಉದ್ಯೋಗಿಗಳ ಆತ್ಮಸ್ಥೈರ್ಯ ಕುಸಿಯುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ರಾಜ್ಯದಲ್ಲಿ ಎಲ್ಲಾ ಇಲಾಖೆಗಳನ್ನು ಒಳಗೊಂಡಂತೆ ಒಟ್ಟು ಮಂಜೂರಾದ ಹುದ್ದೆಗಳೆಷ್ಟು; ಹಾಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು; ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು; (ಇಲಾಖಾವಾರು ಮಾಹಿತಿ ನೀಡುವುದು)

(ಇ) ಇಲಾಖೆಗಳಿಗೆ ಹುದ್ದೆಗಳನ್ನು ಮಂಜೂರು ಮಾಡಲು ಸರ್ಕಾರವು ಅಳವಡಿಸಿಕೊಂಡಿರುವ ಮಾನದಂಡಗಳೇನು; ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಸಮಾನ ಕೆಲಸಕ್ಕೆ ಸಮಾನ ವೇತನ ತತ್ವವನ್ನು ರಾಜ್ಯ ಸರ್ಕಾರಿ ನೌಕರರಿಗೆ ಯಾವ ಕಾಲಮಿತಿಯಲ್ಲಿ ಜಾರಿ ಮಾಡಲಾಗುವುದು;

(ಉ) ದೇಶದ ಇತರ ರಾಜ್ಯಗಳಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಿ ನೌಕರರುಗಳ ವೇತನ ಸರಿಸಮಾನವಾಗಿರುವಾಗ, ನಮ್ಮ ರಾಜ್ಯದಲ್ಲಿ ಈ ವೇತನ ತಾರತಮ್ಯವೇಕೆ; ಅದೇ ನಿಯಮವನ್ನು ನಮ್ಮಲ್ಲಿ ಯಾವಾಗ ಅಳವಡಿಸಿಕೊಳ್ಳುವಿರಿ; ಯಾವ ಕಾಲಮಿತಿಯೊಳಗೆ ಈ ವೇತನ ತಾರತಮ್ಯ ಸಮಸ್ಯೆಯನ್ನು ಸರ್ಕಾರವು ಬಗೆಹರಿಸುವುದು?

## ಬೆಂಗಳೂರಿನಲ್ಲಿ ಅಕ್ರಮವಾಗಿ ವಾಸಿಸುತ್ತಿರುವ ವಿದೇಶಿಯರು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೫೯ (೪೨೮) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅದರಲ್ಲೂ ಬೆಂಗಳೂರಿನಲ್ಲಿ ವಿದೇಶಿಯರು ಅಕ್ರಮವಾಗಿ ವಾಸಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಅಂತಹವರ ಸಂಖ್ಯೆ ಎಷ್ಟು; ಯಾವ್ಯಾವ ದೇಶದವರು ಎಷ್ಟೆಷ್ಟು ಮಂದಿ, ಎಷ್ಟೆಷ್ಟು ದಿನಗಳಿಂದ ರಾಜ್ಯದಲ್ಲಿ ಅಕ್ರಮವಾಗಿ ವಾಸಿಸುತ್ತಿದ್ದಾರೆ;

(ಇ) ಇಂತಹವರ ವಿರುದ್ಧ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ;

(ಈ) ಈ ರೀತಿ ಅಕ್ರಮವಾಗಿ ನೆಲೆಸಿರುವವರು ಬೆಂಗಳೂರಿನಲ್ಲಿ ಮಾದಕ ವಸ್ತುಗಳ ಮಾರಾಟದಲ್ಲಿ ತೊಡಗಿರುವುದು ನಿಜವೇ;

(ಉ) ನಿಜವಿದ್ದಲ್ಲಿ, ಅಂತಹ ಎಷ್ಟು ಪ್ರಕರಣಗಳನ್ನು ಭೇದಿಸಲಾಗಿದೆ; ಸಂಬಂಧಪಟ್ಟವರ ವಿರುದ್ಧ ಪ್ರತಿಯೊಂದು ಪ್ರಕರಣದಲ್ಲಿ ಕೈಗೊಂಡಿರುವ ಕ್ರಮವೇನು;

(ಊ) ಮಾದಕ ವಸ್ತು ಜಾಲವನ್ನು ಮಟ್ಟ ಹಾಕಲು ಪೊಲೀಸ್ ಇಲಾಖೆಯು ಕೈಗೊಂಡಿರುವ ಕ್ರಮಗಳೇನು; ಅವುಗಳು ಎಷ್ಟರಮಟ್ಟಿಗೆ ಜಾರಿಯಾಗಿವೆ?

## ಬಿಬಿಎಂಪಿ ವ್ಯಾಪ್ತಿಯಲ್ಲಿ ನಿವೇಶನಗಳು ಮತ್ತು ಕಟ್ಟಡಗಳ ನಿರ್ಮಾಣ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೬೦ (೪೧೭) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಒಟ್ಟು ನಿವೇಶನಗಳೆಷ್ಟು; ಎಷ್ಟು ನಿವೇಶನಗಳಲ್ಲಿ ಕಟ್ಟಡಗಳನ್ನು ನಿರ್ಮಿಸಲಾಗಿದೆ; ಎಷ್ಟು ನಿವೇಶನಗಳಲ್ಲಿ ಕಟ್ಟಡಗಳನ್ನು ನಿರ್ಮಿಸಿರುವುದಿಲ್ಲ; (ವಿವರ ನೀಡುವುದು)

(ಆ) ನಿರ್ಮಾಣ ಮಾಡಿರುವ ಕಟ್ಟಡಗಳಲ್ಲಿ ವಸತಿ ವಾಣಿಜ್ಯ ಮತ್ತು ಕೈಗಾರಿಕಾ ಕಟ್ಟಡಗಳ ಸಂಖ್ಯೆ ಎಷ್ಟು;

(ಇ) ಮಂಜೂರಾತಿ ಪಡೆದ ನಕ್ಷೆ ಹಾಗೂ ನಿಯಮಾವಳಿಗಳ ವಿರುದ್ಧ ಎಷ್ಟು ಕಟ್ಟಡಗಳನ್ನು ನಿರ್ಮಿಸಲಾಗಿದೆ; (ವಾರ್ಡ್‌ವಾರು ಮಾಹಿತಿ ನೀಡುವುದು)

(ಈ) ನಿರ್ಮಾಣ ಮಾಡಿದ ಎಷ್ಟು ಕಟ್ಟಡಗಳ ಮಾಲೀಕರ ಮೇಲೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಸರ್ಕಾರ ಕ್ರಮಗಳನ್ನು ತೆಗೆದುಕೊಂಡಿದೆ? (ಕಟ್ಟಡವಾರು ಮತ್ತು ಮಾಲೀಕರ ವಿವರಗಳನ್ನು ನೀಡುವುದು)

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ನಿರ್ದೇಶಕರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು, ಕಾಸೂ–743–1500 ಪ್ರತಿಗಳು (ಪಿ1)